ಇ) <u>ಜಿಲ್ಲೆಯಲ್ಲಿನ ಒಟ್ಟು ಶಾಲೆಗಳ ಸಂಖ್ಯೆ x ತಾಲ್ಲೂಕಿನಲ್ಲಿರುವ ಶಾಲೆಗಳ ಸಂಖ್ಯೆ ಮಂಜೂರಾಗಿರುವ ಹೆಚ್ಚುವರಿ ಕೊಠಡಿಗಳ ಸಂಖ್ಯೆ</u>

ಈ ಸೂತ್ರದಂತೆ ಸರ್ವ ಶಿಕ್ಷಾ ಅಭಿಯಾನದಡಿ ಹಂಚಿಕೆ ಮಾಡಿರುವುದರಿಂದ ಯಾವುದೇ ತಾರತಮ್ಯ ಮಾಡಿರುವುದಿಲ್ಲ. ಪ್ರೌಢಶಾಲಾ ಕೊಠಡಿಗಳನ್ನು ಪ್ರೌಢಶಾಲೆಗಳಲ್ಲಿನ ವಿದ್ಯಾರ್ಥಿಗಳ ಸಂಖ್ಯೆಗಳಿಗನುಗುಣವಾಗಿ ಮಂಜೂರು ಮಾಡಲಾಗಿದೆ.

ವಿಧಾನಸಭಾ ಪ್ರಶ್ನೆ ಸಂಖ್ಯೆ 544ಕ್ಕೆ ಅನುಬಂಧ

ಕ್ರಮ ಸಂಖ್ಯೆ	ತಾಲ್ಲೂಕು	ಮಂಜೂರಾದ ಹೆಚ್ಚುವರಿ	
		ಪ್ರಾಥಮಿಕ ಶಾಲೆಗಳು (ಎಸ್.ಎಸ್.ಎ. ಅಡಿ)	ಪ್ರೌಢಶಾಲಾ ಕೊಠಡಿಗಳು (ರಾಜ್ಯ ಯೋಜನೆಯಡಿ)
01.	ಚನ್ನಪಟ್ಟಣ	19	–
02.	ದೇವನಹಳ್ಳಿ	17	5
03.	ದೊಡ್ಡಬಳ್ಳಾಪುರ	28	–
04.	ಹೊಸಕೋಟೆ	21	5
05.	ಕನಕಪುರ	33	–
06.	ಮಾಗಡಿ	32	–
07.	ನೆಲಮಂಗಲ	23	–
08.	ರಾಮನಗರ	23	–
	ಒಟ್ಟು	**196**	**10**

848 (1045) ಶ್ರೀ ನರಸಿಂಹಸ್ವಾಮಿ ಜೆ. (ದೊಡ್ಡಬಳ್ಳಾಪುರ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 2005–06ನೇ ಸಾಲಿನಲ್ಲಿ ರಾಜೀವ್ ಗಾಂಧಿ ವಸತಿ ಯೋಜನೆ ಅಡಿಯಲ್ಲಿ ಮನೆಗಳನ್ನು ಮಂಜೂರಾತಿ ನೀಡಿ ಫಲಾನುಭವಿಗಳನ್ನು ಗುರುತಿಸಿದ್ದು ಈ ವರೆವಿಗೂ ಹಣ ಬಿಡುಗಡೆ ಮಾಡದಿರಲು ಕಾರಣವೇನು;

ಆ) ಬಿಡುಗಡೆ ಮಾಡಲು ಸರ್ಕಾರದಲ್ಲಿ ಹಣವಿಲ್ಲವೆ; ಹಾಗಿಲ್ಲದಿದ್ದಲ್ಲಿ, ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಡಿ. ಬಿ. ಜಯಕುಮಾರ್ (ವಸತಿ ಸಚಿವರು):

ಅ) ಗ್ರಾಮೀಣ ಪ್ರದೇಶಗಳಿಗೆ ಸಂಬಂಧಿಸಿದಂತೆ 2005–06ನೇ ಸಾಲಿನಲ್ಲಿ ಗ್ರಾಮೀಣ ಆಶ್ರಯ ಯೋಜನೆಯಡಿಯಲ್ಲಿ ಪ್ರತಿ ಗ್ರಾಮ ಪಂಚಾಯತಿಗೆ 40

ಮನೆಗಳಂತೆ ಒಟ್ಟು 2,26,080 ಮನೆಗಳ ಗುರಿಯನ್ನು, ಗ್ರಾಮೀಣ ಅಂಬೇಡ್ಕರ್ ಯೋಜನೆಯಡಿ 24,040 ಮನೆಗಳನ್ನು ಹಾಗೂ ಇಂದಿರಾ ಆವಾಸ್ ಯೋಜನೆಯಡಿಯಲ್ಲಿ 53,299 ಮನೆಗಳ ಗುರಿಯನ್ನು ನೀಡಲಾಗಿರುತ್ತದೆ.

ನಗರ ಪ್ರದೇಶಗಳಿಗೆ ಸಂಬಂಧಿಸಿದಂತೆ 2005–06ನೇ ಸಾಲಿನಲ್ಲಿ ನಗರ ಆಶ್ರಯ ಯೋಜನೆಯಡಿ ಒಟ್ಟು 50,000 ಮನೆಗಳ ಗುರಿಯನ್ನು ನೀಡಲಾಗಿರುತ್ತದೆ.

ಗ್ರಾಮೀಣ ಆಶ್ರಯ, ಗ್ರಾಮೀಣ ಅಂಬೇಡ್ಕರ್ ಹಾಗೂ ನಗರ ಆಶ್ರಯ ಯೋಜನೆಯಡಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯು ಪೂರ್ಣಗೊಂಡಿದ್ದು ನಿಗಮಕ್ಕೆ ಸಲ್ಲಿಸಿದ ಅರ್ಹ ಫಲಾನುಭವಿಗಳ ಪಟ್ಟಿಗೆ ನಿಗಮದಿಂದ ಅನುಮೋದನೆ ನೀಡಲಾಗುತ್ತಿದ್ದು ಪ್ರಗತಿಗೆ ಅನುಗುಣವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮ ಪಂಚಾಯತಿಗಳಿಗೆ ಹಾಗೂ ನಗರ ಪ್ರದೇಶಗಳಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡಲಾಗುತ್ತಿದೆ.

ಗ್ರಾಮೀಣ ಆಶ್ರಯ ಯೋಜನೆಯಡಿ ಪ್ರತಿ ಗ್ರಾಮ ಪಂಚಾಯತಿಗೆ ರೂ. 1.00 ಲಕ್ಷಗಳಂತೆ ಈಗಾಗಲೇ ನಿಗಮದಿಂದ ಹಣ ಬಿಡುಗಡೆ ಮಾಡಲಾಗಿರುತ್ತದೆ. ಗ್ರಾಮ ಪಂಚಾಯತಿಗಳು ಈ ಭೌತಿಕ ಪ್ರಗತಿಯನ್ನು ಸಾಧಿಸಿ, ಅದಕ್ಕೆ ತಕ್ಕಂತೆ ಈಗಾಗಲೇ ಬಿಡುಗಡೆ ಮಾಡಿದ ಹಣವನ್ನು ಖರ್ಚು ಮಾಡಿದರೆ ಪ್ರಗತಿಗೆ ಅನುಗುಣವಾಗಿ ಮತ್ತೆ ಹಣ ಬಿಡುಗಡೆ ಮಾಡಲಾಗುತ್ತದೆ.

2005–06ನೇ ಸಾಲಿನಲ್ಲಿ ಇಂದಿರಾ ಆವಾಸ್ ಯೋಜನೆಯಡಿ ದಿನಾಂಕ: 31.03.2006 ರಂತೆ 48,601 ಮನೆಗಳನ್ನು ಪೂರ್ಣಗೊಳಿಸಲಾಗಿದ್ದು, ಇದಕ್ಕಾಗಿ ಕೇಂದ್ರ ಸರ್ಕಾರದಿಂದ ರೂ. 9400.34 ಲಕ್ಷಗಳನ್ನು ಹಾಗೂ ರಾಜ್ಯ ಸರ್ಕಾರದಿಂದ 3133.45 ಲಕ್ಷಗಳನ್ನು ಆಯಾ ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.

ಆ) ಮೇಲ್ಕಂಡ 2005–06ರ ಗುರಿಗಳಿಗೆ ಸಂಬಂಧಿಸಿದಂತೆ ಸರ್ಕಾರದಿಂದ ಬಿಡುಗಡೆಯಾದ ಹಣದ ವಿವರಗಳನ್ನು ಅನುಬಂಧ "ಅ" ನಲ್ಲಿ ನೀಡಲಾಗಿದೆ.

849 (1047) ಶ್ರೀ ಜೆ. ನರಸಿಂಹಸ್ವಾಮಿ (ದೊಡ್ಡಬಳ್ಳಾಪುರ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನ ದೊಡ್ಡಬಳ್ಳಾಪುರ ನಗರಕ್ಕೆ ಸರ್ಕಾರಿ ಬಾಲಕಿಯರ ಪ್ರೌಢಶಾಲೆ, ತೂಬುಗೆರೆ ಗ್ರಾಮಕ್ಕೆ ಸರ್ಕಾರಿ ಪದವಿ ಪೂರ್ವ ಕಾಲೇಜು ಬಾಶೆಟ್ಟಿಹಳ್ಳಿ ಮತ್ತು ಕೊನೆಘಟ್ಟ ಗ್ರಾಮಕ್ಕೆ ಸರ್ಕಾರಿ ಪ್ರೌಢಶಾಲೆಗಳ ಮಂಜೂರಾತಿ ಯಾವ ಹಂತದಲ್ಲಿದೆ;

ಆ) ಇದರ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?